ಕರ್ನಾಟಕ ವಿಧಾನಸಭೆ

(15ನೇ ವಿಧಾನಸಭೆ)
ಹನ್ನೆರಡನೇ ಅಧಿವೇಶನ

ಕಾರ್ಯಕಲಾಪಗಳ ಪಟ್ಟಿ

ಮಂಗಳವಾರ, ದಿನಾಂಕ 8ನೇ ಮಾರ್ಚ್, 2022
(ಸಮಯ: ಬೆಳಿಗ್ಗೆ 11.00 ಗಂಟೆಗೆ)

----

1. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು	:	ಹನ್ನೊಂದನೇ ಪಟ್ಟಿ
ಆ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು	:	ಹನ್ನೊಂದನೇ ಪಟ್ಟಿ

2. ವಿತ್ತೀಯ ಕಾರ್ಯಕಲಾಪ

2022-23ನೇ ಸಾಲಿನ ಆಯವ್ಯಯ ಅಂದಾಜುಗಳ ಮೇಲೆ ಸಾಮಾನ್ಯ ಚರ್ಚೆ.

3. ಗಮನ ಸೆಳೆಯುವ ಸೂಚನೆಗಳು

1) **ಶ್ರೀ ಶಿವಾನಂದ ಎಸ್. ಪಾಟೀಲ ಅವರು** – ಕೃಷ್ಣಾ ಮೇಲ್ದಂಡೆ ಯೋಜನೆಯ ಹಂತ 1 ಮತ್ತು 2ರಲ್ಲಿ ಬಸವನ ಬಾಗೇವಾಡಿ ತಾಲ್ಲೂಕಿನಲ್ಲಿ ಕಲ್ಪಿಸಲಾಗಿರುವ ಪುನರ್ ವಸತಿ ಕೇಂದ್ರಗಳಿಗೆ ಮೂಲಭೂತ ಸೌಕರ್ಯಗಳನ್ನು ಒದಗಿಸುವ ಬಗ್ಗೆ ಮಾನ್ಯ ಜಲಸಂಪನ್ಮೂಲ ಸಚಿವರ ಗಮನ ಸೆಳೆಯುವುದು.

2) **ಶ್ರೀ ಶರತ್ ಕುಮಾರ್ ಬಚ್ಚೇಗೌಡ ಅವರು** – ನಿರ್ಮಾಣ ಕಾಮಗಾರಿಗಳ ವೆಚ್ಚವು ಇತ್ತೀಚೆಗೆ ಹೆಚ್ಚಾಗಿರುವುದರಿಂದ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳಲು ತೊಂದರೆಯಾಗುತ್ತಿರುವುದರಿಂದ ಶಾಸಕರ ಸ್ಥಳೀಯ ಪ್ರದೇಶಾಭಿವೃದ್ಧಿ ನಿಧಿಯನ್ನು ಹೆಚ್ಚಿಸುವ ಬಗ್ಗೆ ಮಾನ್ಯ ಮುಖ್ಯಮಂತ್ರಿಯವರ ಗಮನ ಸೆಳೆಯುವುದು.

3) **ಶ್ರೀ ರಾಜಾ ವೆಂಕಟಪ್ಪ ನಾಯಕ್ ಅವರು** – ರಾಯಚೂರು ಜಿಲ್ಲೆಯ ಮಾನ್ವಿ ವಿಧಾನಸಭಾ ಕ್ಷೇತ್ರದಲ್ಲಿ ಬಾಡಿಗೆ ಕಟ್ಟಡದಲ್ಲಿ ನಡೆಯುತ್ತಿರುವ ಹಿರೇಕೊಟ್ನೇಕಲ್ ಗ್ರಾಮದ ಡಾ: ಬಿ.ಆರ್. ಅಂಬೇಡ್ಕರ್ ಹಾಗೂ ಕಲ್ಲೂರು ಗ್ರಾಮದ ಶ್ರೀಮತಿ ಇಂದಿರಾ ಗಾಂಧಿ ವಸತಿ ಶಾಲೆಗಳಿಗೆ ಸ್ವಂತ ಕಟ್ಟಡ ನಿರ್ಮಾಣ ಮಾಡುವ ಬಗ್ಗೆ ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರ ಗಮನ ಸೆಳೆಯುವುದು.

4) **ಶ್ರೀ ರವೀಂದ್ರ ಶ್ರೀಕಂಠಯ್ಯ ಅವರು** – ರಾಜ್ಯದಲ್ಲಿನ ಸರ್ಕಾರಿ ಗೋಮಾಳದಲ್ಲಿ ಮನೆ ಕಟ್ಟಿಕೊಂಡಿರುವ ಬಡವರು, ಸಣ್ಣ ರೈತರು ಮತ್ತು ಕೂಲಿ ಕಾರ್ಮಿಕರ ಹೆಸರಿಗೆ ಹಕ್ಕುಪತ್ರ ನೀಡಲು ತೊಂದರೆಯಾಗಿರುವುದರಿಂದ ರೈತರಿಗೆ ಹಕ್ಕುಪತ್ರ ನೀಡಲು ಅನುಕೂಲವಾಗುವಂತೆ ಸುತ್ತೋಲೆಯನ್ನು ಮಾರ್ಪಡಿಸುವ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

..2/

5) **ಶ್ರೀ ಗೂಳಿಹಟ್ಟಿ ಡಿ. ಶೇಖರ್ ಅವರು** – ಚಿತ್ರದುರ್ಗ ಜಿಲ್ಲೆ ಹೊಸದುರ್ಗ ತಾಲ್ಲೂಕಿನ ಕಸಬಾ ಹೋಬಳಿ ಗೊರವಿನಕಲ್ಲು ಗ್ರಾಮದಲ್ಲಿ ಸರ್ಕಾರಿ ಜಾಗವನ್ನು ಅನಧಿಕೃತವಾಗಿ ಒತ್ತುವರಿ ಮಾಡಿಕೊಂಡು ಅಕ್ರಮ ದಾಖಲೆಗಳನ್ನು ಸೃಷ್ಟಿಸಿ ಕೊಟ್ಯಾಂತರ ರೂಪಾಯಿಗಳಿಗೆ ಮಾರಾಟ ಮಾಡುತ್ತಿರುವ ಒತ್ತುವರಿದಾರರನ್ನು ತೆರವುಗೊಳಿಸುವ ಬಗ್ಗೆ ಹಾಗೂ ಅಕ್ರಮ ಕಟ್ಟಡಗಳನ್ನು ಮತ್ತು ಅಂಗಡಿ ಮಳಿಗೆಗಳನ್ನು ಕಟ್ಟಲು ಸಹಾಯ ಮಾಡಿರುವ ಅಧಿಕಾರಿಗಳ ವಿರುದ್ಧ ಸೂಕ್ತ ಕ್ರಮ ಕೈಗೊಳ್ಳುವ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

6) **ಡಾ. ಯತೀಂದ್ರ ಸಿದ್ದರಾಮಯ್ಯ ಅವರು** – ರಾಜ್ಯದಲ್ಲಿ ಕಂದಾಯ ಪಾವತಿಸದ ಕಾರಣ ಪಹಣಿಗಳಲ್ಲಿ ಬೀಳು ಎಂದು ದಾಖಲು ಮಾಡಿದ್ದ ರೈತರ ಜಮೀನುಗಳನ್ನು ಸಕ್ರಮಗೊಳಿಸಲು ಅರ್ಜಿ ಕರೆದಿದ್ದ ಅವಧಿಯಲ್ಲಿ ಅರ್ಜಿ ಸಲ್ಲಿಸಲು ಸಾಧ್ಯವಾಗದ ರೈತರಿಗೆ ಪುನಃ ಅರ್ಜಿ ಸಲ್ಲಿಸಲು ಕಾಲಾವಕಾಶ ಕಲ್ಪಿಸುವ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

7) **ಶ್ರೀ ಹೆಚ್. ಹಾಲಪ್ಪ ಹರತಾಳು ಅವರು** – ರಾಜ್ಯದಲ್ಲಿ ಸಾವಿರಾರು ಶಾಲೆಗಳಿಗೆ ನೀಡಿರುವ ಜಮೀನುಗಳನ್ನು ದುರುಪಯೋಗಪಡಿಸಿಕೊಳ್ಳುವುದನ್ನು ತಡೆಯಲು ಸದರಿ ಜಮೀನುಗಳನ್ನು ಭೂಸುಧಾರಣಾ ಕಾಯ್ದೆಯಡಿಯಲ್ಲಿ ಗೇಣಿದಾರರಿಗೆ ನೀಡುವ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

8) **ಶ್ರೀ ಕೆ.ಜಿ. ಬೋಪಯ್ಯ ಅವರು** – ಗ್ರಾಮೀಣ ಪ್ರದೇಶಗಳಲ್ಲಿ ರೈತರು ಸರ್ಕಾರಿ ಜಮೀನುಗಳಲ್ಲಿ ಕೃಷಿ ಮಾಡಿಕೊಂಡಿರುವುದನ್ನು ಕರ್ನಾಟಕ ಭೂ ಸುಧಾರಣಾ ಕಾಯ್ದೆ 192(ಎ) ವ್ಯಾಪ್ತಿಯಿಂದ ಹೊರಗಿಡುವ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

9) **ಶ್ರೀ ದಿನಕರ ಕೇಶವ ಶೆಟ್ಟಿ ಅವರು** – ಕುಮಟಾ ತಾಲ್ಲೂಕಿನ ಅಘನಾಶಿನಿ ನದಿಯಲ್ಲಿ ನಡೆಯುತ್ತಿರುವ ಚಿಪ್ಪಿ ಗಣಿಗಾರಿಕೆಯಿಂದಾಗಿ ನದಿಯಲ್ಲಿನ ಜೀವ ಸಂಕುಲ ನಾಶವಾಗಿ ಮೀನುಗಾರರು ಜೀವನ ನಿರ್ವಹಿಸುವುದು ದುಸ್ತರವಾಗಿರುವುದರಿಂದ ಚಿಪ್ಪಿ ಗಣಿಗಾರಿಕೆ ನಿಷೇಧ ಮಾಡುವ ಬಗ್ಗೆ ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಹಾಗೂ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರ ಗಮನ ಸೆಳೆಯುವುದು.

10) **ಶ್ರೀ ಕೃಷ್ಣ ಬೈರೇಗೌಡ ಅವರು** – ವೈಮಾನಿಕ ಹಾಗೂ ಸಾಹಸ ಕ್ರೀಡೆಗಳ ಹೆಸರಿನಲ್ಲಿ ಹೊಸದಾಗಿ ರಚಿಸಲಾಗಿರುವ ಸೊಸೈಟಿಗೆ ಜಕ್ಕೂರು ವೈಮಾನಿಕ ತರಬೇತಿ ಶಾಲೆಯ ಬೆಲೆ ಬಾಳುವ ಸರ್ಕಾರಿ ಜಾಗವನ್ನು ಎಕ್ಸಿಕ್ಯುಟೀವ್ ಕ್ಲಬ್ ಮಾಡಲು ನೀಡಿ ಅಧಿಕಾರವನ್ನು ದುರುಪಯೋಗಪಡಿಸಿಕೊಳ್ಳುತ್ತಿರುವ ಬಗ್ಗೆ ಮಾನ್ಯ ರೇಷ್ಮೆ ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರ ಗಮನ ಸೆಳೆಯುವುದು.

11) **ಶ್ರೀ ಯಶವಂತರಾಯಗೌಡ ವಿಠ್ಠಲಗೌಡ ಪಾಟೀಲ್ ಅವರು** – ವಿಜಯಪುರ ಜಿಲ್ಲೆಯ ಇಂಡಿ ತಾಲ್ಲೂಕಿನ ಸಾವಳಸಂಗ ಗ್ರಾಮದ ವ್ಯಾಪ್ತಿಯಲ್ಲಿರುವ ಅರಣ್ಯ ಪ್ರದೇಶವನ್ನು 'ರಕ್ಷಿತ ಅರಣ್ಯ ಪ್ರದೇಶ'ವೆಂದು ಹಾಗೂ ಇಂಡಿ ಮತ್ತು ಚಡಚಣ ತಾಲ್ಲೂಕಿನ ವ್ಯಾಪ್ತಿಯಲ್ಲಿ ಕೃಷ್ಣಮೃಗಗಳು ವಾಸಿಸುತ್ತಿರುವ ಪ್ರದೇಶವನ್ನು 'ಕೃಷ್ಣಮೃಗಗಳ ಸಂರಕ್ಷಿತ ಪ್ರದೇಶ'ವೆಂದು ಘೋಷಿಸುವ ಬಗ್ಗೆ ಮಾನ್ಯ ಅರಣ್ಯ ಹಾಗೂ ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಸಚಿವರ ಗಮನ ಸೆಳೆಯುವುದು.

ಎಂ.ಕೆ.ವಿಶಾಲಾಕ್ಷಿ
ಕಾರ್ಯದರ್ಶಿ(ಪ್ರ)